# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 490
2. ಸದಸ್ಯರ ಹೆಸರು : ಶ್ರೀ ಗೋವಿಂದ ರಾಜು
3. ಉತ್ತರಿಸಬೇಕಾದ ದಿನಾಂಕ : 22-12-2022
4. ಉತ್ತರಿಸುವವರು : ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೋಲಾರ ಜಿಲ್ಲೆಗೆ ಬೆಂಗಳೂರಿನ ಕೋರಮಂಗಲ-ಚಲ್ಲಘಟ್ಟ (ಕೆ.ಸಿ.ವ್ಯಾಲಿ) ಇಲ್ಲಿಂದ ಹರಿದು ಬರುವ ಚರಂಡಿ ನೀರನ್ನು ಎಷ್ಟು ಹಂತಗಳಲ್ಲಿ ಶುದ್ಧೀಕರಿಸಲಾಗುತ್ತಿದೆ; | ಬೆಂಗಳೂರು ನಗರದ ತ್ಯಾಜ್ಯ ನೀರನ್ನು ದ್ವಿತೀಯ ಹಂತದಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಶುದ್ಧೀಕರಿಸಿ ನೀಡಲಾಗುತ್ತಿದೆ. |
| ಆ | ಈ ನೀರು ಯಾವ ಯಾವ ಕೆಲಸ ಕಾರ್ಯಗಳಿಗೆ ಬಳಸಿಕೊಳ್ಳಬಹುದು; ವೈಜ್ಞಾನಿಕವಾಗಿ ಈ ನೀರನ್ನು ಎಷ್ಟು ಹಂತಗಳಲ್ಲಿ ಶುದ್ಧೀಕರಿಸಬೇಕಾಗಿರುತ್ತದೆ; | ಮಾನ್ಯ ಸರ್ವೋಚ್ಛ ನ್ಯಾಯಾಲಯದ Public Interest Litigation (PIL) 25087/2018 ದಾವೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯವು ಯೋಜನೆಯ ಕುರಿತು ವೈಜ್ಞಾನಿಕವಾಗಿ ಅಧ್ಯಯನ ಮಾಡಿ ವರದಿಯನ್ನು ಸಲ್ಲಿಸುವಂತೆ ಭಾರತೀಯ ವಿಜ್ಞಾನ ಸಂಸ್ಥೆಯವರಿಗೆ ಸೂಚಿಸಿರುತ್ತಾರೆ. ಅದರಂತೆ ವೈಜ್ಞಾನಿಕ ವರದಿಯನ್ನು ಭಾರತೀಯ ವಿಜ್ಞಾನ ಸಂಸ್ಥೆಯವರು ಸಿದ್ಧಪಡಿಸಿ ವರದಿಯನ್ನು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಮತ್ತು ಎನ್.ಜಿ.ಟಿ. ಗೆ ಸಹ ಸಲ್ಲಿಸಲಾಗಿದೆ.<br><br>ಭಾರತೀಯ ವಿಜ್ಞಾನ ಸಂಸ್ಥೆಯವರು ನೀಡಿರುವ ವರದಿಯಲ್ಲಿ ದ್ವಿತೀಯ ಹಂತದಲ್ಲಿ ಶುದ್ಧೀಕರಿಸಿದ ತ್ಯಾಜ್ಯ ನೀರನ್ನು ಅಂತರ್ಜಲ ಮರುಪೂರಣಗೊಳಿಸಲು ಸೂಕ್ತವಾಗಿದೆಯೆಂದು ವರದಿ ಮಾಡಿದ್ದಾರೆ. ಆದರಂತೆ ಈ ಯೋಜನೆಯಡಿಯಲ್ಲಿ ದ್ವಿತೀಯ ಹಂತದಲ್ಲಿ ಶುದ್ಧೀಕರಿಸಿದ ತ್ಯಾಜ್ಯ ನೀರನ್ನು ಕೆರೆಗಳಿಗೆ ತುಂಬಿಸಿ ಅಂತರ್ಜಲ ಮರುಪೂರಣಗೊಳಿಸಲಾಗುತ್ತಿದೆ. |
| ಇ | ಈಗಾಗಲೇ ಅಳವಡಿಸಿರುವ ವಿದ್ಯುತ್ ಪಂಪ್‌ಗಳು ದುರಸ್ಥಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ವತಿಯಿಂದ ನೀಡುವ ದ್ವಿತೀಯ ಹಂತದಲ್ಲಿ ಸಂಸ್ಕರಿಸಿ ತ್ಯಾಜ್ಯ ನೀರನ್ನು ಏತ ನೀರಾವರಿ ಮೂಲಕ ಎತ್ತುವಳಿ ಮಾಡುವುದು ಮಾತ್ರ ಸಣ್ಣ ನೀರಾವರಿ ಇಲಾಖೆಯ ಜವಾಬ್ದಾರಿಯಾಗಿರುತ್ತದೆ. ಈ ಯೋಜನೆಗೆ ಸಂಬಂಧಿಸಿದಂತೆ ವಿದ್ಯುತ್ ಪಂಪ್ ಮತ್ತು ಮೋಟಾರ್‌ಗಳು ಸುಸ್ಥಿಯಲ್ಲಿದ್ದು, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುತ್ತದೆ. |
| ಈ | ವಿದ್ಯುತ್ ಪಂಪ್‌ಗಳು ದುರಸ್ಥಿಯಲ್ಲಿ ರುವುದರಿಂದ ಕಲುಷಿತ ನೀರು ಕೆರೆಗಳಲ್ಲಿ ತುಂಬಿಕೊಂಡಿರುವುದರಿಂದ ರೈತರು ಹಾಗೂ ಸಾರ್ವಜನಿಕರಿಗೆ ಆರೋಗ್ಯ ಸಮಸ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವಿದ್ಯುತ್ ಪಂಪುಗಳು ದುರಸ್ಥಿಯಲ್ಲಿರುವ ಪ್ರಶ್ನೆ ಉದ್ಭವಿಸುವುದಿಲ್ಲ. |

| | | |
|---|---|---|
| ಉ | ಈ ಯೋಜನೆಗೆ ನಿಗದಿಪಡಿಸಿರುವ ಅನುದಾನವೆಷ್ಟು; ಬಳಕೆಯಾಗಿರುವ ಅನುದಾನವೆಷ್ಟು ಹಾಗೂ ಇನ್ನು ಎಷ್ಟು ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಬೇಕಾಗಿದೆ? | ಈ ಯೋಜನೆಗೆ ರೂ.1342.00 ಕೋಟಿಗಳು ನಿಗದಿಪಡಿಸಿದ್ದು, ಇದರಲ್ಲಿ ರೂ.1292.00 ಕೋಟಿಗಳಷ್ಟು ಅನುದಾನ ವೆಚ್ಚವಾಗಿದ್ದು, ಹಾಗೂ ರೂ.50.00 ಕೋಟಿಗಳಷ್ಟು ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಬೇಕಾಗಿದೆ.<br>ಪ್ರಸ್ತುತ ಈ ಯೋಜನೆಯು ಪೂರ್ಣಗೊಂಡಿರುತ್ತದೆ ಹಾಗೂ 5 ವರ್ಷಗಳವರೆಗೆ ನಿರ್ವಹಣೆ ಮತ್ತು ಪೋಷಣೆ (O&M) ಕಾಮಗಾರಿ ಪ್ರಗತಿಯಲ್ಲಿರುತ್ತದೆ. |

**ಸಂಖ್ಯೆ:ಎಂಐಡಿ 366 ಎಲ್‌ಎಕ್ಯೂ 2022**

**(ಜೆ.ಸಿ.ಮಾಧುಸ್ವಾಮಿ)**
ಕಾನೂನು, ಸಂಸದೀಯ ವ್ಯವಹಾರಗಳು
ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು